POLICE PUBLIC SCHOOL

(Managed by PPS(CBSE) TRUST)
Koramangala, Bengaluru-560034, Karnataka
Email: ppsk.bssc@gmail.com
Website: www.policepublicschoolksrpblr.org
Telephone No: 080-25506765,
6362598124

VIBES JANUARY 2026

ಶೈಕ್ಷಣಿಕ ಪ್ರಗತಿಯ ಮಾರ್ಗ

ಜನವರಿ 2ರಂದು, ಕೆಎಸ್ಆರ್‌ಪಿ 4ನೇ ಪಡೆಯ ಕಮಾಂಡಂಟ್ ಹಾಗೂ ಶಾಲೆಯ ಸಹ ಕಾರ್ಯದರ್ಶಿಗಳಾದ ಶ್ರೀ ಸಂತೋಷಕುಮಾರ್ ಹೆಚ್. ವಿ. ಅವರು 10ನೇ ಮತ್ತು 12ನೇ ತರಗತಿ ವಿದ್ಯಾರ್ಥಿಗಳಿಗೆ ಬೋಧಿಸುವ ಶಿಕ್ಷಕರೊಂದಿಗೆ ಮಕ್ಕಳ ವಿದ್ಯಾಭ್ಯಾಸದ ಕುರಿತು ಚರ್ಚಿಸಿದರು. ಈ ಸಭೆಯಲ್ಲಿ ಪ್ರಿ-ಬೋರ್ಡ್ ಪರೀಕ್ಷಾ ಫಲಿತಾಂಶಗಳ ವಿಶ್ಲೇಷಣೆ ನಡೆಸಲಾಯಿತು. ವಿದ್ಯಾರ್ಥಿಗಳ ಫಲಿತಾಂಶ ಸುಧಾರಣೆಗಳ ಕಡೆ ಗಮನ ಹರಿಸಲು ಸೂಚಿಸಲಾಯಿತು. ಮುಂದಿನ ಬೋರ್ಡ್ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶಗಳನ್ನು ಸಾಧಿಸಲು ವಿವಿಧ ಬೋಧನಾ ವಿಧಾನಗಳು ಮತ್ತು ಶೈಕ್ಷಣಿಕ ತಂತ್ರಗಳನ್ನು ಕುರಿತು ಚರ್ಚಿಸಲಾಯಿತು. ವಿದ್ಯಾರ್ಥಿಗಳ ಸಾಧನೆಯನ್ನು ಹೆಚ್ಚಿಸಲು ಅಗತ್ಯ ಮಾರ್ಗಸೂಚಿಗಳನ್ನು ನೀಡಲಾಯಿತು.

ಪ್ರಿ-ಬೋರ್ಡ್ ಪರೀಕ್ಷೆ–II ರ ಪಾಲಕರ–ಶಿಕ್ಷಕರ ಸಭೆ

ಜನವರಿ 3 ರಂದು 10ನೇ ಮತ್ತು 12ನೇ ತರಗತಿಯ ವಿದ್ಯಾರ್ಥಿಗಳ ಪಾಲಕರಿಗಾಗಿ ಪ್ರಿ ಬೋರ್ಡ್ ಪರೀಕ್ಷೆ–II ಸಂಬಂಧಿಸಿದ ಪಾಲಕರ–ಶಿಕ್ಷಕರ ಸಭೆಯನ್ನು ಆಯೋಜಿಸಲಾಯಿತು. ಈ ಸಭೆಯಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿಯ ಶೈಕ್ಷಣಿಕ ಪ್ರಗತಿಯ ಕುರಿತು ಚರ್ಚಿಸಲಾಯಿತು. ಮುಂದಿನ ಬೋರ್ಡ್ ಪರೀಕ್ಷೆಗಳಲ್ಲಿ ಉತ್ತಮ ಫಲಿತಾಂಶಗಳನ್ನು ಸಾಧಿಸಲು ಅನುಸರಿಸಬೇಕಾದ ತಂತ್ರಗಳು ಹಾಗೂ ಕಾರ್ಯಯೋಜನೆಗಳನ್ನು ರೂಪಿಸಲಾಯಿತು. ವಿದ್ಯಾರ್ಥಿಗಳ ಸಾಧನೆಯನ್ನು ಮತ್ತಷ್ಟು ಹೆಚ್ಚಿಸಲು ಪಾಲಕರಿಗೆ ಅಗತ್ಯ ಮಾರ್ಗಸೂಚಿಗಳು ಮತ್ತು ಸಲಹೆಗಳನ್ನು ನೀಡಲಾಯಿತು.

ರಸ್ತೆ ಸುರಕ್ಷತಾ ದಿನಾಚರಣೆಯ ಆಚರಣೆ

ಸಿಬಿಎಸ್‌ಸಿ ನೀಡಿದ “ರೋಡ್ ಸುರಕ್ಷಾ, ಜೀವನ ಸುರಕ್ಷಾ” ಎಂಬ ಧ್ಯೇಯವಾಕ್ಯದಂತೆ ಶಾಲೆಯಲ್ಲಿ ಜನವರಿ 12ರಂದು ರಸ್ತೆ ಸುರಕ್ಷತಾ ದಿನವನ್ನು ಆಚರಿಸಲಾಯಿತು. ರಸ್ತೆ ಮೇಲೆ ಸುರಕ್ಷಿತ ಕ್ರಮಗಳ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಸಂಚಾರಿ ವಿಭಾಗದ ಪೊಲೀಸ್ ಸಿಬ್ಬಂದಿಗಳಾದ ಶ್ರೀ ಪ್ರಸನ್ನ ಕುಮಾರ್ ಮತ್ತು ಶ್ರೀ ಸತೀಶ್ ಎಸ್ ಎ ಅವರು ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿ ರಸ್ತೆ ಸುರಕ್ಷತೆಯ ಮುಂಜಾಗ್ರತಾ ಕ್ರಮಗಳ ಕುರಿತು ಮಹತ್ವದ ಮಾಹಿತಿಯನ್ನು ನೀಡಿದರು. ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಧರಿಸುವ ಮಹತ್ವ, ರಸ್ತೆ ದಾಟುವಾಗ ಎಚ್ಚರಿಕೆ ವಹಿಸುವುದು, ವಾಹನ ಚಾಲನೆ ಮಾಡುವ ಸಮಯದಲ್ಲಿ ಮೊಬೈಲ್ ಫೋನ್ ಬಳಕೆಯನ್ನು ತಪ್ಪಿಸುವುದು ಹಾಗೂ ಸಂಚಾರ ಸಿಗ್ನಲ್ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಅಗತ್ಯತೆಯ ಕುರಿತು ಮಕ್ಕಳಿಗೆ ಮಾರ್ಗದರ್ಶನ ನೀಡಿದರು. ರಸ್ತೆ ಸುರಕ್ಷತೆಯ ಸಂದೇಶವನ್ನು ಇನ್ನಷ್ಟು ಬಲಪಡಿಸಲು ಹಾಗೂ ಜಾಗೃತಿಯನ್ನು ವಿಸ್ತರಿಸಲು ಶಾಲೆಯ ವಿದ್ಯಾರ್ಥಿಗಳು ರಸ್ತೆ ಸುರಕ್ಷತೆಯ ಕುರಿತು ಚಿಕ್ಕ ನಾಟಕವನ್ನು ಪ್ರದರ್ಶಿಸಿದರು. ಈ ನಾಟಕದ ಮೂಲಕ ರಸ್ತೆ ಮೇಲೆ ಜವಾಬ್ದಾರಿಯುತ ವರ್ತನೆಯ ಮಹತ್ವವನ್ನು ಪರಿಣಾಮಕಾರಿಯಾಗಿ ತಿಳಿಸಲಾಯಿತು.

ಕೆಂದ್ರಿಯ ವಿದ್ಯಾಲಯ ಮತ್ತು ಜವಾಹರ್ ನವೋದಯ ವಿದ್ಯಾಲಯ ಶಿಕ್ಷಕರ ನೇಮಕಾತಿ ಪರೀಕ್ಷಾ ಕೇಂದ್ರ

ಜನವರಿ 10 ಮತ್ತು 11ರಂದು ಶಾಲೆಯಲ್ಲಿ ಕೆಂದ್ರಿಯ ವಿದ್ಯಾಲಯ ಹಾಗೂ ಜವಾಹರ್ ನವೋದಯ ವಿದ್ಯಾಲಯ ಶಿಕ್ಷಕರ ನೇಮಕಾತಿ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲಾಯಿತು. ಈ ಪರೀಕ್ಷೆಯನ್ನು ನಿಗದಿತ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಶಿಸ್ತುಬದ್ಧ ಹಾಗೂ ಸುವ್ಯವಸ್ಥಿತ ರೀತಿಯಲ್ಲಿ ಆಯೋಜಿಸಲಾಯಿತು. ಶಾಲಾ ಆಡಳಿತ ಮಂಡಳಿ, ಬೋಧಕ ಸಿಬ್ಬಂದಿ ಹಾಗೂ ಸಹಾಯಕ ಸಿಬ್ಬಂದಿಗಳ ಸಹಕಾರದಿಂದ ಪರೀಕ್ಷೆಯು ಸುಗಮವಾಗಿ ನಡೆಯಿತು. ಅಭ್ಯರ್ಥಿಗಳಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಿ, ಸುರಕ್ಷತೆ ಮತ್ತು ಪಾರದರ್ಶಕತೆಯನ್ನು ಕಾಪಾಡಲಾಯಿತು. ಈ ಕಾರ್ಯಕ್ರಮವು ಸಂಸ್ಥೆಯ ಜವಾಬ್ದಾರಿ, ಪಾರದರ್ಶಕತೆ ಹಾಗೂ ಶೈಕ್ಷಣಿಕ ಶ್ರೇಷ್ಠತೆಯನ್ನು ಪ್ರತಿಬಿಂಬಿಸಿತು.

ಸೈನ್ಯ ದಿನಾಚರಣೆಯ ವಿಶೇಷ ಸಭೆ

ಸೈನ್ಯ ದಿನಾಚರಣೆಯ ಪ್ರಯುಕ್ತ ಜನವರಿ 14ರಂದು ಶಾಲೆಯಲ್ಲಿ ವಿಶೇಷ ಸಭೆಯನ್ನು ಆಯೋಜಿಸಲಾಯಿತು. ಈ ಕಾರ್ಯಕ್ರಮದಲ್ಲಿ ಭಾರತೀಯ ಸೈನ್ಯದ ಮಹತ್ವ ಹಾಗೂ ತ್ಯಾಗಗಳನ್ನು ಪ್ರತಿಬಿಂಬಿಸುವಂತೆ ಹಿಂದಿ ಮತ್ತು ಇಂಗ್ಲಿಷ್ ಭಾಷೆಗಳಲ್ಲಿನ ಲೇಖನ ವಾಚನವನ್ನು ವಿದ್ಯಾರ್ಥಿಗಳು ಪ್ರಸ್ತುತಪಡಿಸಿದರು. ವಿದ್ಯಾರ್ಥಿಗಳು ಮನಮೋಹಕ ನೃತ್ಯ ಪ್ರದರ್ಶನವನ್ನು ಮಾಡಿದರು. ಜೊತೆಗೆ ಭಾರತೀಯ ಸೈನ್ಯದ ಕುರಿತು ವಿದ್ಯಾರ್ಥಿಗಳ ಜ್ಞಾನವನ್ನು ಪರೀಕ್ಷಿಸಲು ರಸಪ್ರಶ್ನೆ ಸ್ಪರ್ಧೆಯನ್ನು ಕೂಡ ಆಯೋಜಿಸಲಾಯಿತು. ಈ ವಿಶೇಷ ಸಭೆಯು ವಿದ್ಯಾರ್ಥಿಗಳಲ್ಲಿ ದೇಶಭಕ್ತಿ, ಜಾಗೃತಿ ಹಾಗೂ ನಮ್ಮ ಸೈನಿಕರ ಬಗ್ಗೆ ಗೌರವ ಮತ್ತು ಕೃತಜ್ಞತೆಯ ಭಾವನೆಗಳನ್ನು ಮೂಡಿಸಲು ಸಹಕಾರಿಯಾಯಿತು.

ಮಕರ ಸಂಕ್ರಾಂತಿ ವಿಶೇಷ ಸಭೆ

ಜನವರಿ 14 ರಂದು ಮಕರ ಸಂಕ್ರಾಂತಿ ಹಬ್ಬದ ಅಂಗವಾಗಿ ಶಾಲೆಯಲ್ಲಿ ವಿಶೇಷ ಸಭೆಯನ್ನು ಆಯೋಜಿಸಲಾಯಿತು. ಈ ವಿಶೇಷ ಸಭೆಯು ವಿದ್ಯಾರ್ಥಿಗಳಿಗೆ ಮಕರ ಸಂಕ್ರಾಂತಿಯ ಸಾಂಸ್ಕೃತಿಕ ಮಹತ್ವವನ್ನು ತಿಳಿಯಲು ಸಹಾಯಮಾಡಿದ್ದು, ಪರಂಪರೆಯ ಮೌಲ್ಯಗಳು ಹಾಗೂ ಹಬ್ಬದ ಸಂಭ್ರಮವನ್ನು ಉತ್ತೇಜಿಸಲು ಸಹಕಾರಿಯಾಯಿತು. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಮಕರ ಸಂಕ್ರಾಂತಿಯ ಐತಿಹಾಸಿಕ, ಸಾಂಸ್ಕೃತಿಕ ಮತ್ತು ಸಾಮಾಜಿಕ ಮಹತ್ವದ ಕುರಿತು ಲೇಖನ ವಾಚನ ನಡೆಸಿದರು. ಸೂರ್ಯನು ಮಕರ ರಾಶಿಗೆ ಪ್ರವೇಶಿಸುವ ದಿನದಂದು ಆಚರಿಸಲಾಗುತ್ತದೆ. ಈ ದಿನದಿಂದ ಉತ್ತರಾಯಣ ಆರಂಭವಾಗುತ್ತಿದ್ದು, ಹಗಲು ಸಮಯ ಹೆಚ್ಚಾಗಿ ರಾತ್ರಿಯ ಸಮಯ ಕಡಿಮೆಯಾಗುತ್ತದೆ. ಆದ್ದರಿಂದ ಈ ದಿನವನ್ನು ಶುಭ ದಿನವೆಂದು ತಮ್ಮಪರಿಗಣಿಸಲಾಗುತ್ತದೆ. ಮಕರ ಸಂಕ್ರಾಂತಿ ಕೃಷಿ ಹಬ್ಬವಾಗಿದ್ದು, ರೈತರು ಬೆಳೆಗಳ ಕೊಯ್ಲು ಮುಗಿದ ಸಂತೋಷವನ್ನು ವ್ಯಕ್ತಪಡಿಸುತ್ತಾರೆ. ಸೂರ್ಯ ದೇವರಿಗೆ ಕೃತಜ್ಞತೆ ಸಲ್ಲಿಸುವ ಉದ್ದೇಶದಿಂದ ಈ ಹಬ್ಬವನ್ನು ಆಚರಿಸಲಾಗುತ್ತದೆ. ಜನರು ಎಳ್ಳು-ಬೆಲ್ಲ, ಸಕ್ಕರೆ ಅಚ್ಚು, ಪೊಂಗಲ್ ಮುಂತಾದ ಸಿಹಿತಿನಿಸುಗಳನ್ನು ತಯಾರಿಸಿ ಹಂಚಿಕೊಳ್ಳುತ್ತಾರೆ ಎಂದು ಹೇಳಿ. ಈ ಹಬ್ಬವು ಪರಸ್ಪರ ಪ್ರೀತಿ, ಸಹೋದರತ್ವ ಮತ್ತು ಸಾಮಾಜಿಕ ಏಕತೆಯನ್ನು ಬೆಳೆಸುತ್ತದೆ ಎಂದು ತಿಳಿಸಲಾಯಿತು. ಒಟ್ಟಾರೆ ಈ ಕಾರ್ಯಕ್ರಮ ಭಾರತದ ವಿವಿಧ ರಾಜ್ಯಗಳ ಸಂಪ್ರದಾಯಗಳು ಹಾಗೂ ಸಂಸ್ಕೃತಿಗಳ ಬಗ್ಗೆ ತಿಳಿದುಕೊಳ್ಳಲು ಉತ್ತಮ ವೇದಿಕೆಯಾಗಿತ್ತು.

ಸೈಬರ್ ಹೈಜೀನ್ ಕುರಿತ ಜಾಗೃತಿ

ಜನವರಿ 16 ರಂದು 9ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಸೈಬರ್ ಹೈಜೀನ್ ಕುರಿತು ವಿಶೇಷ ಕಾರ್ಯಕ್ರಮ ಆಯೋಜಿಸಲಾಯಿತು. ಈ ಕಾರ್ಯಕ್ರಮವನ್ನು ಏರ್ ಫೋರ್ಸ್ ಶಾಲೆಯ 9ನೇ ತರಗತಿಯ ವಿದ್ಯಾರ್ಥಿ ಮಾಸ್ಟರ್ ಅರ್ಜುನ್ ಅವರು ನಡೆಸಿಕೊಟ್ಟರು. ಅವರು ಸುರಕ್ಷಿತ ಆನ್‌ಲೈನ್ ಅಭ್ಯಾಸಗಳು, ಇಂಟರ್‌ನೆಟ್‌ನ ಜವಾಬ್ದಾರಿಯುತ ಬಳಕೆ ಹಾಗೂ ವೈಯಕ್ತಿಕ ಮಾಹಿತಿಯ ರಕ್ಷಣೆಯ ಮಹತ್ವದ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿದರು. ಈ ಕಾರ್ಯಕ್ರಮ ಅತ್ಯಂತ ಮಾಹಿತಿ ಪ್ರಧಾನವಾಗಿದ್ದು, ಡಿಜಿಟಲ್ ಸುರಕ್ಷತೆ ಮತ್ತು ಸೈಬರ್ ಜವಾಬ್ದಾರಿಯ ಕುರಿತು ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲು ಸಹಕಾರಿಯಾಯಿತು.

ಪ್ರಿ-ಬೋರ್ಡ್ ಪರೀಕ್ಷೆ – III

ಜನವರಿ ಎರಡನೇ ವಾರದಲ್ಲಿ 10 ಮತ್ತು 12ನೇ ತರಗತಿ ವಿದ್ಯಾರ್ಥಿಗಳಿಗಾಗಿ ಪ್ರಿ-ಬೋರ್ಡ್ ಪರೀಕ್ಷೆ – III ಅನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಪರೀಕ್ಷೆಯು ವಿದ್ಯಾರ್ಥಿಗಳ ಶೈಕ್ಷಣಿಕ ಸಿದ್ಧತೆಯನ್ನು ಮೌಲ್ಯಮಾಪನ ಮಾಡಲು, ಬೋರ್ಡ್ ಪರೀಕ್ಷೆಯ ಮಾದರಿಯೊಂದಿಗೆ ಅವರನ್ನು ಪರಿಚಯಿಸಲು ಹಾಗೂ ಪರೀಕ್ಷಾ ಫಲಿತಾಂಶಗಳನ್ನು ವಿಶ್ಲೇಷಿಸಿ ಪರಿಹಾರಾತ್ಮಕ ಕ್ರಮಗಳು, ಕೇಂದ್ರೀಕೃತ ಪುನರಾವರ್ತನೆ ಹಾಗೂ ವೈಯಕ್ತಿಕವಾಗಿ ಶಿಕ್ಷಣದ ಕಡೆ ಗಮನ ಹರಿಸಲು ಯೋಜಿಸಲಾಗಿದೆ. ಇದರ ಮೂಲಕ ವಿದ್ಯಾರ್ಥಿಗಳು ಅಂತಿಮ ಬೋರ್ಡ್ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡುವಂತೆ ಮಾರ್ಗದರ್ಶನ ನೀಡಲಾಗುತ್ತದೆ.

ಸಿಬಿಎಸ್‌ಸಿ 'ಬಡ್ಡಿಂಗ್ ಆಥರ್ಸ್' ಯೋಜನೆಯಡಿ ಕಥಾಲೇಖನ ಸ್ಪರ್ಧೆ:

ಜನವರಿ 23ರಂದು 5ನೇ ರಿಂದ 8ನೇ ತರಗತಿ ವಿದ್ಯಾರ್ಥಿಗಳಿಗಾಗಿ ಕಥಾಲೇಖನ ಸ್ಪರ್ಧೆಯನ್ನು ಆಯೋಜಿಸಲಾಯಿತು. ಈ ಸ್ಪರ್ಧೆಯು ವಿದ್ಯಾರ್ಥಿಗಳ ಸೃಜನಶೀಲತೆ, ಕಲ್ಪನಾಶಕ್ತಿ ಹಾಗೂ ಭಾಷಾ ಅಭಿವ್ಯಕ್ತಿ ಕೌಶಲ್ಯಗಳನ್ನು ಉತ್ತೇಜಿಸಿತು. ವಿದ್ಯಾರ್ಥಿಗಳು ಉತ್ಸಾಹದಿಂದ ಭಾಗವಹಿಸಿ ತಮ್ಮ ಬರವಣಿಗೆ ಪ್ರತಿಭೆಯನ್ನು ಪ್ರದರ್ಶಿಸಿದರು

12ನೇ ತರಗತಿ ಪ್ರಾಯೋಗಿಕ ಪರೀಕ್ಷೆಗಳು – ಅನುಭವದ ಮೂಲಕ ಜ್ಞಾನ ವೃದ್ಧಿ

ಜನವರಿ ತಿಂಗಳಲ್ಲಿ ವಿಜ್ಞಾನ ಮತ್ತು ವಾಣಿಜ್ಯ ವಿಭಾಗದ 12ನೇ ತರಗತಿಯ ವಿದ್ಯಾರ್ಥಿಗಳಿಗಾಗಿ ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲಾಯಿತು. ಈ ಪರೀಕ್ಷೆಗಳು ವಿದ್ಯಾರ್ಥಿಗಳಿಗೆ ತಮ್ಮ ಜ್ಞಾನವನ್ನು ಪ್ರಾಯೋಗಿಕವಾಗಿ ಅನ್ವಯಿಸುವ ಅವಕಾಶವನ್ನು ನೀಡಲಾಯಿತು. ಪ್ರಯೋಗಾತ್ಮಕ ಕೌಶಲ್ಯ, ವಿಶ್ಲೇಷಣಾತ್ಮಕ ಸಾಮರ್ಥ್ಯ ಮತ್ತು ಮೌಲ್ಯಮಾಪನ ಮಾಡಲು ಈ ಪರೀಕ್ಷೆಗಳು ಸಹಾಯಕವಾಗಿದ್ದವು. ಮೌಲ್ಯಮಾಪನದೊಂದಿಗೆ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಯಿತು. ವಿದ್ಯಾರ್ಥಿಗಳು ಆಸಕ್ತಿ, ಆತ್ಮವಿಶ್ವಾಸಯೊಂದಿಗೆ ಪ್ರಾಯೋಗಿಕ ಪರೀಕ್ಷೆಗಳಲ್ಲಿ ಭಾಗವಹಿಸಿದರು. ಪ್ರಯೋಗಗಳನ್ನು ಮಾಡುವುದರ ಮೂಲಕ ಅವರು ವೈಜ್ಞಾನಿಕ ದೃಷ್ಟಿಕೋನ, ವಿಶ್ಲೇಷಣಾತ್ಮಕ ಚಿಂತನೆ, ಸಮಸ್ಯೆ ಪರಿಹಾರ ಕೌಶಲ್ಯ ಅಭಿವೃದ್ಧಿಪಡಿಸಿಕೊಂಡರು.

ಗಣರಾಜ್ಯೋತ್ಸವ ಆಚರಣೆ

ಜನವರಿ 26 ರಂದು 77ನೇ ಗಣರಾಜ್ಯೋತ್ಸವವನ್ನು ಅತ್ಯಂತ ಸಂಭ್ರಮದಿಂದ ಆಚರಿಸಲಾಯಿತು. ಈ ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಶ್ರೀ ರಘುನಾಥ್ ಕೆ.ಎಸ್. ಕೆಎಸ್‌ಪಿಎಸ್, ಡಿಐಜಿಪಿ, ಕೆಎಸ್‌ಆರ್‌ಪಿ ಹಾಗೂ ಪಿಪಿಎಸ್ ಕಾರ್ಯದರ್ಶಿಗಳು ಆಗಮಿಸಿದ್ದರು. ಇವರೊಂದಿಗೆ ಶ್ರೀ ಸಂತೋಷಕುಮಾರ್ ಎಚ್.ವಿ. ಕೆಎಸ್‌ಪಿಎಸ್, ಕಮಾಂಡಂಟ್, 4ನೇ ಪಡೆ, ಕೆಎಸ್‌ಆರ್‌ಪಿ ಮತ್ತು ಪಿಪಿಎಸ್ ಸಹಾಯಕ ಕಾರ್ಯದರ್ಶಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವು ಗೌರವಾನ್ವಿತ ಅತಿಥಿಗಳಿಂದ ರಾಷ್ಟ್ರಧ್ವಜಾರೋಹಣದೊಂದಿಗೆ ಆರಂಭಗೊಂಡಿತು. ನಂತರ ರಾಷ್ಟ್ರಗೀತೆ ಹೇಳುವುದರ ಮೂಲಕ ತಾಯ್ನಾಡಿಗೆ ಗೌರವ ಸಲ್ಲಿಸಲಾಯಿತು. ತಂಡದ ನಾಯಕಿ ರಕ್ಷಾ ಎಂ ಯಾದವ್ ಅವರ ನೇತೃತ್ವದಲ್ಲಿ ನಡೆದ ಪಥಸಂಚಲನವು ವಿದ್ಯಾರ್ಥಿಗಳ ಶಿಸ್ತು ಹಾಗೂ ಏಕತೆಯನ್ನು ಪ್ರದರ್ಶಿಸಿತು. ಈ ಕಾರ್ಯಕ್ರಮದಲ್ಲಿ ಸಂವಿಧಾನದ ಮಹತ್ವವನ್ನು ವಿವರಿಸುವ ಭಾಷಣ ಹಾಗೂ ದೇಶಭಕ್ತಿ ಸಾರುವ ನೃತ್ಯವನ್ನು ವಿದ್ಯಾರ್ಥಿಗಳು ಪ್ರದರ್ಶಿಸಿದರು.

2024-25ನೇ ಸಾಲಿನ ಬೋರ್ಡ್ ಪರೀಕ್ಷೆಗಳಲ್ಲಿ ಉತ್ತಮ ಸಾಧನೆ ಮಾಡಿದ 10ನೇ ತರಗತಿಗೆ ಬೋಧಿಸಿರುವ ಶಿಕ್ಷಕರಿಗೆ ನಗದು ಬಹುಮಾನಗಳನ್ನು ನೀಡಿ ಗೌರವಿಸಲಾಯಿತು. ಮುಖ್ಯ ಅತಿಥಿಗಳು ಶಾಲೆಯ ಪ್ರಗತಿಗೆ ಮೆಚ್ಚುಗೆ ವ್ಯಕ್ತಪಡಿಸಿ, ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ರಾಷ್ಟ್ರ ಮೌಲ್ಯಗಳನ್ನು ಪಾಲಿಸಿ ಏಕತೆಯ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಇದೇ ದಿನ ಬೆಂಗಳೂರು ನಗರದ ಮಾಣಿಕ ಶಾ ಪರೇಡ್ ಮೈದಾನದಲ್ಲಿ ನಡೆದ ಗಣರಾಜ್ಯೋತ್ಸವ ಪಥಸಂಚಲನದಲ್ಲಿ ಶಾಲೆಯ ತಂಡವು ದ್ವಿತೀಯ ಬಹುಮಾನವನ್ನು ಪಡೆದು ಶಾಲೆಯ ಗೌರವವನ್ನು ಹೆಚ್ಚಿಸಿತು. ನಮ್ಮ ಶಾಲೆಯ ವಿದ್ಯಾರ್ಥಿಗಳ ಶ್ರಮ, ಶಿಸ್ತಿನ ಪಥಸಂಚಲನವನ್ನು ಗುರುತಿಸಿ ಕರ್ನಾಟಕ ರಾಜ್ಯದ ಘನ ರಾಜ್ಯಪಾಲರು, ಮಾನ್ಯ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು ಪ್ರಶಸ್ತಿಪಲಕ ನೀಡಿ ಗೌರವಿಸಿದ್ದಾರೆ.ಈ ಮಹತ್ವದ ಯಶಸ್ಸಿಗಾಗಿ ಎಲ್ಲಾ ವಿದ್ಯಾರ್ಥಿಗಳು ಮತ್ತು ಶಿಕ್ಷಕರ ತಂಡಕ್ಕೆ ಹೃತ್ಪೂರ್ವಕ ಅಭಿನಂದನೆಗಳು.

ಎಂಟನೇ ಮತ್ತು ಒಂಬತ್ತನೇ ತರಗತಿ ಪೋಷಕರ ಸಂವಾದ ಸಭೆ

ಜನವರಿ 24ರಂದು 8 ಮತ್ತು 9 ತರಗತಿಯ ವಿದ್ಯಾರ್ಥಿಗಳ ಪೋಷಕರೊಂದಿಗೆ ಸಂವಾದ ಸಭೆಯನ್ನು ಶಾಲೆಯಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಸಭೆಯಲ್ಲಿ ಶಾಲೆಯ ಪ್ರಾಂಶುಪಾಲರು ಹಾಗೂ ಎಲ್ಲಾ ವಿಷಯ ಶಿಕ್ಷಕರು ಸಕ್ರಿಯವಾಗಿ ಭಾಗವಹಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯ ಬಗ್ಗೆ ಚರ್ಚೆ ನಡೆಸಿದರು. ಶಿಕ್ಷಕರು ವಿದ್ಯಾರ್ಥಿಗಳ ಸಾಧನೆ, ಶೈಕ್ಷಣಿಕ ಸುಧಾರಣೆ ಹಾಗೂ ಉತ್ತಮ ಫಲಿತಾಂಶಗಳನ್ನು ಪಡೆಯಲು ಅನುಸರಿಸಬೇಕಾದ ಪರಿಣಾಮಕಾರಿ ವಿಧಾನಗಳ ಕುರಿತು ಪೋಷಕರಿಗೆ ಮಾರ್ಗದರ್ಶನ ನೀಡಿದರು. ಮಕ್ಕಳಿಗೆ ನಿಯಮಿತ ಅಧ್ಯಯನದ ಅಭ್ಯಾಸವನ್ನು ಬೆಳೆಸುವಲ್ಲಿ ಪೋಷಕರು ಸಹಕರಿಸಿ ಹಾಗೂ ಶಿಕ್ಷಕರೊಂದಿಗೆ ನಿರಂತರ ಸಂವಹನವನ್ನು ಕಾಪಾಡಿಕೊಳ್ಳಬೇಕೆಂದು ಸಲಹೆ ನೀಡಲಾಯಿತು. ಈ ಸಭೆ ಅತ್ಯಂತ ಫಲಪ್ರದವಾಗಿದ್ದು, ವಿದ್ಯಾರ್ಥಿಗಳನ್ನು ಶೈಕ್ಷಣಿಕ ಯಶಸ್ಸಿನತ್ತ ಮುನ್ನಡೆಸುವಲ್ಲಿ ಶಾಲೆ ಮತ್ತು ಪೋಷಕರ ನಡುವಿನ ಸಹಭಾಗಿತ್ವವನ್ನು ಮತ್ತಷ್ಟು ಬಲಪಡಿಸಿತು. ಈ ಸಭೆಯಲ್ಲಿ ಪ್ರತಿಯೊಬ್ಬ ವಿಷಯ ಶಿಕ್ಷಕರು ಮಾತನಾಡಿ ಪೋಷಕರಿಗೆ ಮಾರ್ಗದರ್ಶನ ನೀಡಿದರು. ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಪ್ರಗತಿಯಲ್ಲಿ ಪೋಷಕರು ವಹಿಸಬೇಕಾದ ಪಾತ್ರವನ್ನು ಕುರಿತು ಮನವರಿಕೆ ಮಾಡಿಕೊಟ್ಟರು. ಪೋಷಕರು ಮತ್ತು ಶಿಕ್ಷಕರ ನಡುವಿನ ಸಹಕಾರದಿಂದ ವಿದ್ಯಾರ್ಥಿಗಳ ಉತ್ತಮ ಭವಿಷ್ಯ ನಿರ್ಮಾಣಕ್ಕೆ ಈ ಸಭೆ ಮಹತ್ವದ ಪಾತ್ರ ವಹಿಸಿತು. ಸಭೆಯು ಸ್ನೇಹಪರ ಮತ್ತು ಸಹಕಾರಾತ್ಮಕ ವಾತಾವರಣದಲ್ಲಿ ಯಶಸ್ವಿಯಾಗಿ ಮುಕ್ತಾಯವಾಯಿತು.

ಐಐಟಿಎಸಿಬಿಯಲ್ಲಿ ಎನ್. ಆರ್. ನಾರಾಯಣ ಮೂರ್ತಿಯವರಿಂದ ಯುವ ಮನಸ್ಸುಗಳಿಗೆ ಪ್ರೇರಣೆ

ಜನವರಿ 31ರಂದು 9ನೇ ತರಗತಿಯ ವಿದ್ಯಾರ್ಥಿಗಳು ಐಐಟಿಎಸಿಬಿನಲ್ಲಿ ಇನ್ಫೋಸಿಸ್ ಸಂಸ್ಥೆಯ ಸ್ಥಾಪಕರಾದ ಶ್ರೀ ಎನ್. ಆರ್. ನಾರಾಯಣ ಮೂರ್ತಿ ಅವರ ಪ್ರೇರಣಾದಾಯಕ ಉಪನ್ಯಾಸದಲ್ಲಿ ಭಾಗವಹಿಸಿದರು. ತಮ್ಮ ಭಾಷಣದಲ್ಲಿ ಅವರು ಶಿಕ್ಷಣ ಹಾಗೂ ಬಲವಾದ ಮೌಲ್ಯಗಳು ರಾಷ್ಟ್ರ ನಿರ್ಮಾಣದಲ್ಲಿ ವಹಿಸುವ ಮಹತ್ವವನ್ನು ವಿವರಿಸಿದರು. ಸ್ಟೆಮ್ ಶಿಕ್ಷಣದಲ್ಲಿ ಶ್ರೇಷ್ಠತೆ, ನೈತಿಕ ಜವಾಬ್ದಾರಿ ಮತ್ತು ಕಲಿಕೆಯ ಸಾಮರ್ಥ್ಯ ನೈಜ ಜಗತ್ತಿನ ಸಮಸ್ಯೆಗಳನ್ನು ಪರಿಹರಿಸಲು ಅತ್ಯಗತ್ಯವೆಂದು ಅವರು ಒತ್ತಿಹೇಳಿದರು. ವಿದ್ಯಾರ್ಥಿಗಳು ಭಯವನ್ನು ಮೀರಿ ಕಠಿಣ ಪರಿಶ್ರಮ, ವಿನಯ ಮತ್ತು ಸಮೂಹಸಹಭಾಗಿತ್ವ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕೆಂದು ಪ್ರೇರೇಪಿಸಿದರು. ಈ ಅಧಿವೇಶನವು ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಮತ್ತು ನಿಷ್ಠೆಯೊಂದಿಗೆ ಕಲಿಕೆಯನ್ನು ಮುಂದುವರಿಸಲು ಉತ್ತೇಜನ ನೀಡಿತು.

ಕಲೆ ಮತ್ತು ವಿಜ್ಞಾನ ಪ್ರದರ್ಶನ – “ಕ್ರಿಯೇಟಿವ್ ಕಾಸ್ಮೋಸ್”

ಜನವರಿ 31 ರಂದು “ಕ್ರಿಯೇಟಿವ್ ಕಾಸ್ಮೋಸ್” ಎಂಬ ಶೀರ್ಷಿಕೆಯೊಂದಿಗೆ ಕಲೆ ಮತ್ತು ವಿಜ್ಞಾನ ಪ್ರದರ್ಶನವನ್ನು ಯಶಸ್ವಿಯಾಗಿ ಆಯೋಜಿಸಲಾಯಿತು. ಈ ಕಾರ್ಯಕ್ರಮವು ಕಲ್ಪನೆ, ನವೀನತೆ ಮತ್ತು ಬುದ್ಧಿಮತ್ತೆಯನ್ನು ಆಚರಿಸುವ ಉದ್ದೇಶದಿಂದ ನಡೆಯಿತು. ವಿದ್ಯಾರ್ಥಿಗಳಿಗೆ ತಮ್ಮ ಸೃಜನಶೀಲತೆ ಹಾಗೂ ವೈಜ್ಞಾನಿಕ ಕುತೂಹಲವನ್ನು ಪ್ರದರ್ಶಿಸಲು ಉತ್ತಮ ವೇದಿಕೆಯನ್ನು ಒದಗಿಸಿತು. ಪೋಷಕರನ್ನು “ಕ್ಯೂರಿಯಾಸಿಟಿ ಅಡ್ಡಾ” ಹಾಗೂ “ಸ್ಪಾರ್ಕ್ ಲರ್ನಿಂಗ್ ಸೆಂಟರ್”ಗೆ ಆಹ್ವಾನಿಸಲಾಯಿತು. ಇಲ್ಲಿ ವಿದ್ಯಾರ್ಥಿಗಳು ಪಾಠಪುಸ್ತಕಗಳ ಹೊರತಾಗಿ ಅನುಭವಾಧಾರಿತ ಹಾಗೂ ಅನ್ವೇಷಣಾಧಾರಿತ ಯೋಜನೆಗಳನ್ನು ಪ್ರದರ್ಶಿಸಿ ತಮ್ಮ ಜ್ಞಾನ ಮತ್ತು ಕೌಶಲ್ಯಗಳನ್ನು ಪ್ರದರ್ಶಿಸಿದರು. ಈ ಪ್ರದರ್ಶನವು ವಿದ್ಯಾರ್ಥಿಗಳ ಉತ್ಸಾಹ, ಪ್ರತಿಭೆ ಮತ್ತು ತಂಡಭಾವನೆಯನ್ನು ಪ್ರತಿಬಿಂಬಿಸಿ, ಅಧ್ಯಯನವನ್ನು ಮತ್ತಷ್ಟು ಅರ್ಥಪೂರ್ಣವಾಗಿಸಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಜಿಇ ಏರೋಸ್ಪೇಸ್ ಸಂಸ್ಥೆಯ ಸಲಹಾ ಇಂಜಿನಿಯರ್ ಶ್ರೀ ರವೀಂದ್ರ ಗಾಣಿಗಾರ್ ಅವರು ಉಪಸ್ಥಿತರಿದ್ದು, ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಮಾತುಗಳ ಮೂಲಕ ನವೀನ ಚಿಂತನೆ ಮತ್ತು ಅನ್ವೇಷಣೆಯ ಮಹತ್ವವನ್ನು ತಿಳಿಸಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕೆಎಸ್ಆರ್‌ಪಿ ಡಿಐಜಿಪಿ ಹಾಗೂ ಪಿಪಿಎಸ್ ಕಾರ್ಯದರ್ಶಿಗಳಾದ ಶ್ರೀ ರಘುನಾಥ್ ಕೆ. ಎಸ್. ಅವರು ವಹಿಸಿದ್ದರು. ಈ ಸಂದರ್ಭದಲ್ಲಿ ಕೆಎಸ್ಆರ್‌ಪಿ 4ನೇ ಪಡೆ ಕಮಾಂಡಂಟ್ ಹಾಗೂ ಪಿಪಿಎಸ್ ಸಹ ಕಾರ್ಯದರ್ಶಿಗಳಾದ ಶ್ರೀ ಸಂತೋಷಕುಮಾರ್ ಎಚ್. ವಿ. ಅವರು ಉಪಸ್ಥಿತರಿದ್ದರು. ಈ ಪ್ರದರ್ಶನ ಅತ್ಯಂತ ಯಶಸ್ವಿಯಾಗಿ ನಡೆಯಿತು. ವಿದ್ಯಾರ್ಥಿಗಳ ಸೃಜನಶೀಲ ಸಾಮರ್ಥ್ಯ ಮತ್ತು ಯುವ ಮನಸ್ಸಿನ ಪ್ರತಿಭೆಯಿಂದ ಪೋಷಕರು ಹಾಗೂ ಭೇಟಿ ನೀಡಿದ ಅತಿಥಿಗಳು ಅತ್ಯಂತ ಮೆಚ್ಚುಗೆ ವ್ಯಕ್ತಪಡಿಸಿದರು.

That’s a wrap for now!
We’ll be back soon with more updates, fun features and school highlights.
Thanks for staying connected!